# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | **1018** |
| **ಮಾನ್ಯ ಸದಸ್ಯರ ಹೆಸರು** | : | **ಡಾ. ಎಂ. ಜಿ. ಮುಳೆ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | : | **25.08.2026** |
| **ಉತ್ತರಿಸಬೇಕಾದ ಸಚಿವರು** | : | **ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ '1962 ಸಂಚಾರಿ ಪಶುಚಿಕಿತ್ಸಾ ಘಟಕ'ಗಳ ಸೇವೆಗೆ ರೈತರಿಂದ ಹೆಚ್ಚಿನ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ್ ಜಿಲ್ಲೆಯಲ್ಲಿ ಒಟ್ಟು ತಾಲ್ಲೂಕಿಗೆ ಒಂದರಂತೆ 08 ಸಂಚಾರಿ ಪಶುಚಿಕಿತ್ಸಾ ಘಟಕಗಳು ಕಾರ್ಯನಿರ್ವಹಿಸುತ್ತವೆ. |
| ಆ) | ಪ್ರಸ್ತುತ ಬೆಳಿಗ್ಗೆ 9.00 ರಿಂದ ಸಂಜೆ 5.00 ರವರೆಗಿನ ಸೇವೆಯಿಂದಾಗಿ ರಾತ್ರಿ ವೇಳೆಯ ತುರ್ತು ಚಿಕಿತ್ಸೆಗೆ ತೊಂದರೆಯಾಗುತ್ತಿರುವುದು ನಿಜವೇ; ಸೇವೆಯ ಸಮಯ ವಿಸ್ತರಣೆ ಹಾಗೂ ಹೆಚ್ಚುವರಿ ವಾಹನ ಮಂಜೂರಾತಿಗೆ ಕ್ರಮ ಕೈಗೊಳ್ಳಲಾಗುವುದೇ; | ಕೇಂದ್ರ ಸರ್ಕಾರದ ಮಾರ್ಗಸೂಚಿಯಲ್ಲಿ, ಸಂಚಾರಿ ಪಶು ಚಿಕಿತ್ಸಾ ಘಟಕಗಳ (ಪಶು ಅಂಬ್ಯುಲೆನ್ಸ್) ಸೇವೆಯನ್ನು ಬೆಳಿಗ್ಗೆ 9.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಮಾತ್ರ ಕಾರ್ಯ ನಿರ್ವಹಿಸಲು ಅವಕಾಶವಿರುತ್ತದೆ.<br><br>ಸಂಚಾರಿ ಪಶು ಚಿಕಿತ್ಸಾ ಘಟಕ ವಾಹನಗಳಿಗೆ ಹೆಚ್ಚು ಬೇಡಿಕೆ ಇರುವುದನ್ನು ಪರಿಗಣಿಸಿ, ಹಾಲಿ ಇರುವ 275 ಸಂಚಾರಿ ಪಶು ಚಿಕಿತ್ಸಾ ಘಟಕಗಳನ್ನು ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆಯವರೆಗೆ ಹಾಗೂ ಮಧ್ಯಾಹ್ನ 2.00 ಗಂಟೆಯಿಂದ ರಾತ್ರಿ 10.00 ಗಂಟೆಯವರೆಗೆ ಎರಡು ಪಾಳಿಗಳಲ್ಲಿ ಕಾರ್ಯನಿರ್ವಹಿಸಲು ಹಾಗೂ ದೂರದ ಪ್ರದೇಶಗಳ ರೈತರ ಜಾನುವಾರುಗಳ ತುರ್ತು ಚಿಕಿತ್ಸಾ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಒದಗಿಸುವ ಉದ್ದೇಶದಿಂದ, ಪ್ರತಿ 50,000 ಜಾನುವಾರುಗಳಿಗೆ ಒಂದು ಸಂಚಾರಿ ಪಶು ಚಿಕಿತ್ಸಾ ಘಟಕದಂತೆ ಹೆಚ್ಚುವರಿ 125 ವಾಹನಗಳನ್ನು ಒದಗಿಸುವಂತೆ ಅನುಮೋದನೆ ನೀಡಲು ಕೇಂದ್ರ ಸರ್ಕಾರಕ್ಕೆ ದಿನಾಂಕ: 13-02-2025 ರಂದು ಪ್ರಸ್ತಾವನೆ ಸಲ್ಲಿಸಲಾಗಿತ್ತು.<br><br>ಆದರೆ ಕೇಂದ್ರ ಸರ್ಕಾರವು ಪ್ರಸ್ತಾವನೆಯನ್ನು ಪ್ರಸ್ತುತ ಪರಿಗಣಿಸಲು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ.<br><br>ಆದ್ದರಿಂದ ತುರ್ತು ಚಿಕಿತ್ಸಾ ವಾಹನಗಳ ಸೇವೆಯ ಸಮಯದ ವಿಸ್ತರಣೆ ಹಾಗೂ ಹೆಚ್ಚುವರಿ ವಾಹನ ನೀಡುವ ಪ್ರಸ್ತಾಪವಿರುವುದಿಲ್ಲ. |

| | | |
|---|---|---|
| ಇ) | ಜಿಲ್ಲೆಯ ವಿವಿಧ ಸಂಚಾರಿ ಘಟಕಗಳಲ್ಲಿ ಖಾಲಿ ಇರುವ ಪಶುವೈದ್ಯರು ಹಾಗೂ ಸಿಬ್ಬಂದಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು; | ಸಂಚಾರಿ ಪಶು ಚಿಕಿತ್ಸಾ ಘಟಕ ವಾಹನಗಳ ಕಾರ್ಯಾಚರಣೆಯನ್ನು ಟೆಂಡರ್ ಮೂಲಕ ಗುರುತಿಸಲಾದ ಸೇವಾ ಪೂರೈಕೆದಾರರಾದ **M/s. Eduspark, Malad (West), Mumbai-400064** (Lead Member of Consortium), ರವರ ಮುಖಾಂತರ ಕಾರ್ಯಾಚರಣೆಗೊಳಿಸಲಾಗುತ್ತಿದ್ದು, ಬೀದರ್ ಜಿಲ್ಲೆಯ ಸಂಚಾರಿ ಪಶುಚಿಕಿತ್ಸಾ ಘಟಕಗಳಲ್ಲಿ ಪಶುವೈದ್ಯರು ಹಾಗೂ ಸಿಬ್ಬಂದಿಗಳ ಹುದ್ದೆ ಖಾಲಿ ಇರುವುದಿಲ್ಲ. |
| ಈ) | ಈ ಯೋಜನೆಯಿಂದಾಗಿ ಜಿಲ್ಲೆಯಲ್ಲಿ ಹಾಲಿನ ಉತ್ಪಾದನೆ ಹೆಚ್ಚಾಗಿರುವುದು ನಿಜವೇ; ಹಾಗಿದ್ದಲ್ಲಿ, ಜಿಲ್ಲೆಯ ಎಲ್ಲಾ ಭಾಗಗಳಿಗೂ ಈ ಸೇವೆಯನ್ನು ಪರಿಣಾಮಕಾರಿಯಾಗಿ ವಿಸ್ತರಿಸಲು ರೂಪಿಸಿರುವ ಯೋಜನೆಯೇನು? | ಈ ಯೋಜನೆಯ ಪಶುಗಳಿಗೆ ಚಿಕಿತ್ಸೆ ಮಾಡಿ ಅವುಗಳ ಆರೋಗ್ಯವನ್ನು ಕಾಪಾಡುವ ಒಂದು ಯೋಜನೆಯಾಗಿರುತ್ತದೆ.<br><br>ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 1 ಲಕ್ಷ ಜಾನುವಾರುಗಳಿಗೆ (ದನ,ಎಮ್ಮೆ,ಕುರಿ,ಮೇಕೆ,ಹಂದಿ) ಒಂದರಂತೆ ಎಂವಿಯುಗಳನ್ನು (ಮೋಬೈಲ್ ವೆಟರ್‌ನರಿ ಯುನಿಟ್) ನೀಡಲಾಗಿದೆ. ಯೋಜನೆಯ ಮಾರ್ಗಸೂಚಿಯಲ್ಲಿ ಎಂವಿಯುಗಳ ಸಂಖ್ಯೆ ಹೆಚ್ಚಿಸಲು ಅವಕಾಶವಿರುವುದಿಲ್ಲ. ಹಾಲಿ ಇರುವ ಎಂವಿಯುಗಳಿಂದ ಬೀದರ್ ಜಿಲ್ಲೆಯ ಎಲ್ಲಾ ಭಾಗಗಳಿಗೂ ಸೇವೆ ನೀಡಲು ಕ್ರಮವಹಿಸಲಾಗಿದೆ. |

**ಸಂಖ್ಯೆ:ಪಸಂಮೀ 230 ಸಲೆವಿ 2026**

24/8

**(ಸಿ. ಪುಟ್ಟರಂಗಶೆಟ್ಟಿ)**

**ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**